# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ | : | 84(09) |
| ಸದಸ್ಯರ ಹೆಸರು | : | ಶ್ರೀ ಸಿ.ಟಿ.ರವಿ (ವಿಧಾನಸಭಾ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 17.08.2026 |
| ಉತ್ತರಿಸುವ ಸಚಿವರು | : | ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಪ್ರಸ್ತುತ ಜಾರಿಯಲ್ಲಿರುವ ಶಿಕ್ಷಣ ನೀತಿಯ ಬಗ್ಗೆ ವಿವರ ನೀಡುವುದು; ದ್ವಿಭಾಷಾ ಶಿಕ್ಷಣ ನೀತಿ ಎಂದಿನಿಂದ ಜಾರಿಗೆ ಬಂದಿದೆ; ಕೇಂದ್ರ ಸರ್ಕಾರದ ಶಿಕ್ಷಣ ನೀತಿ ಕುರಿತು ಸಂಪೂರ್ಣ ಮಾಹಿತಿ ಒದಗಿಸುತ್ತದು; | ಪ್ರಸ್ತುತ ರಾಜ್ಯದಲ್ಲಿ ಈ ಮೊದಲು ಜಾರಿಯಲ್ಲಿದ್ದ ಶಿಕ್ಷಣ ನೀತಿಯನ್ನು ಅನುಸರಿಸಲಾಗುತ್ತಿದ್ದು, ತ್ರಿಭಾಷಾ ಸೂತ್ರ ಜಾರಿಯಲ್ಲಿರುತ್ತದೆ.<br><br>ರಾಷ್ಟ್ರೀಯ ಶಿಕ್ಷಣ ನೀತಿಯ ಆಶಯಗಳಿಗೆ ವಿರೋಧ ಇಲ್ಲದಂತೆ ರಾಜ್ಯದಲ್ಲಿ ಪ್ರಾದೇಶಿಕ ಸಮತೋಲನ ಕಾಪಾಡುವ ದೃಷ್ಟಿಯಿಂದ ರಾಜ್ಯ ಹಾಗೂ ವಿದ್ಯಾರ್ಥಿಗಳ ಹಿತಾಸಕ್ತಿಗೆ ಅನುಗುಣವಾಗಿ ರಾಜ್ಯದಲ್ಲಿ ಹೊಸ ಶಿಕ್ಷಣ ನೀತಿಯನ್ನು ರೂಪಿಸಲು ಸರ್ಕಾರವು 2023-24ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಈ ಕೆಳಕಂಡಂತೆ ಘೋಷಿಸಿರುತ್ತದೆ.<br><br>"ಕೇಂದ್ರ ಸರ್ಕಾರ ಜಾರಿಗೊಳಿಸಿದ ರಾಷ್ಟ್ರೀಯ ಶಿಕ್ಷಣ ನೀತಿಯು ಒಕ್ಕೂಟ ವ್ಯವಸ್ಥೆಗೆ ಮಾರಕವಾಗಿರುವಂತಹ ಹಾಗೂ ಸಂವಿಧಾನ ಮತ್ತು ವಿರುದ್ಧವಾಗಿರುವ ಪ್ರಜಾಪ್ರಭುತ್ವಕ್ಕೆ ಅವೈಜ್ಞಾನಿಕ ಅಂಶಗಳನ್ನು ಒಳಗೊಂಡಿದೆ. ಬಹುಧರ್ಮ, ಬಹುಭಾಷೆ, ಬಹುಸಂಸ್ಕೃತಿ ಇರುವ ನಮ್ಮ ದೇಶಕ್ಕೆ ಏಕರೂಪದ ಶಿಕ್ಷಣ ವ್ಯವಸ್ಥೆ ಹೊಂದಿಕೊಳ್ಳುವುದಿಲ್ಲ.<br><br>ರಾಜ್ಯದ ಅಸ್ಮಿತೆಯನ್ನು ಎತ್ತಿ ಹಿಡಿಯುವ, ಉನ್ನತ ಶಿಕ್ಷಣವನ್ನು ಜಾಗತಿಕ ಮಟ್ಟಕ್ಕೆ ಕೊಂಡೊಯ್ಯಲು ವಿದ್ಯಾರ್ಥಿಗಳಿಗೆ ಉದ್ಯೋಗಾಧಾರಿತ ಶಿಕ್ಷಣವನ್ನು ನೀಡಿ ಯುವಜನರನ್ನು ಸಾಮಾಜಿಕವಾಗಿ ಮತ್ತು ಆರ್ಥಿಕವಾಗಿ ಸಬಲಗೊಳಿಸಲು ಒತ್ತು ನೀಡುವ ನಿಟ್ಟಿನಲ್ಲಿ ಸ್ಥಳೀಯವಾದ ಸಾಮಾಜಿಕ, ಸಾಂಸ್ಕೃತಿಕ ಮತ್ತು ಆರ್ಥಿಕ ವಾಸ್ತವಾಂಶಗಳನ್ನು ಒಳಗೊಂಡ ಹೊಸ ಶಿಕ್ಷಣ ನೀತಿಯನ್ನು ರೂಪಿಸಲಾಗುವುದು" ಪ್ರಸ್ತುತ ರಾಜ್ಯದಲ್ಲಿ ರಾಷ್ಟ್ರೀಯ ಶಿಕ್ಷಣ ನೀತಿ-2020 ನ್ನು ರದ್ದುಗೊಳಿಸಿರುವುದಿಲ್ಲ. ಬದಲಿಗೆ ದೇಶದಲ್ಲಿನ ನೂತನ ರಾಷ್ಟ್ರೀಯ ಶಿಕ್ಷಣ ನೀತಿ-2020 ಸೇರಿದಂತೆ ಇಲ್ಲಿಯವರೆಗೂ ರಚನೆಗೊಂಡು ಅನುಷ್ಠಾನಗೊಂಡಿರುವ ಎಲ್ಲಾ ಶಿಕ್ಷಣ ನೀತಿ ಆಯೋಗಗಳ ವರದಿಗಳನ್ನು ಪರಿಗಣಿಸಿ ಗುಣಾತ್ಮಕ ಶಿಕ್ಷಣ ನೀತಿಯನ್ನು ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ರಾಜ್ಯದಲ್ಲಿ ಶಾಲಾ ಮತ್ತು ಉನ್ನತ ಶಿಕ್ಷಣವನ್ನು ಜಾಗರೂಕತೆಯಿಂದ ಪರಿಶೀಲಿಸಿ ಸೂಕ್ತ ಯೋಜನೆಗಳನ್ನು ಶಿಫಾರಸ್ಸು ಮಾಡಲು ಶ್ರೇಷ್ಠ ಶಿಕ್ಷಣ ತಜ್ಞರಾದ Prof. Sukhdev Thorat, an eminent educationist, Indian Economist, Professor, Writer and Former, Chairman of UGC, New Delhi, ಇವರ ಅಧ್ಯಕ್ಷತೆಯಲ್ಲಿ ಸಮಿತಿಯನ್ನು ರಚಿಸಲಾಗಿರುತ್ತದೆ.<br><br>ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣಕ್ಕೆ ಸಂಬಂಧಿಸಿದಂತೆ ಪ್ರಸ್ತುತ ರಾಜ್ಯ ಶಿಕ್ಷಣ ನೀತಿ ಆಯೋಗವು ಅಂತಿಮ ವರದಿಯನ್ನು ಶಿಕ್ಷಣ ಇಲಾಖೆಗೆ ಸಲ್ಲಿಸಿದ್ದು, ಸರ್ಕಾರದ ಹಂತದಲ್ಲಿ ಪರಿಶೀಲನೆಯಲ್ಲಿರುತ್ತದೆ. |

| | | |
|---|---|---|
| ಆ) | ರಾಜ್ಯದಲ್ಲಿ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಹಿಂದಿ ಭಾಷೆ ಪರೀಕ್ಷೆಗೆ ಮಾನ್ಯತೆ ಇದೆಯೇ ; | ಸರ್ಕಾರವು ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿ ವತಿಯಿಂದ ಎಸ್.ಎಸ್.ಎಲ್.ಸಿ ಪರೀಕ್ಷೆಯನ್ನು ಆರು ವಿಷಯಗಳಿಗೆ ಒಟ್ಟು 625 ಅಂಕಗಳಿಗೆ ಪರೀಕ್ಷೆಯನ್ನು ನಡೆಸಲಾಗುತ್ತದೆ ಹಾಗೂ ಆರು ಭಾಷೆಗಳನ್ನು ಒಳಗೊಂಡಂತೆ ಹಿಂದಿ ಭಾಷೆ ಪರೀಕ್ಷೆಗೆ ಮಾನ್ಯತೆ ಇರುತ್ತದೆ. |
| ಇ) | ಎಸ್.ಎಸ್.ಎಲ್.ಸಿ. ಪರೀಕ್ಷೆಗೆ ಹಿಂದಿ ಭಾಷೆ ಪರೀಕ್ಷೆಯ ಅಂಕಗಳನ್ನು ಪರಿಗಣಿಸುವ ವಿಚಾರಕ್ಕೆ ಸಂಬಂಧಿಸಿದಂತೆ ಮಾನ್ಯ ಉಚ್ಚ ನ್ಯಾಯಾಲಯ ನೀಡಿರುವ ಸೂಚನೆ ಏನು ; | ಎಸ್ಎಸ್ಎಲ್ಸಿ ಪರೀಕ್ಷೆಗೆ ಹಿಂದಿ ಭಾಷೆ ಪರೀಕ್ಷೆಯ ಅಂಕಗಳನ್ನು ಪರಿಗಣಿಸುವ ವಿಚಾರಕ್ಕೆ ಸಂಬಂಧಿಸಿದಂತೆ ಮಾನ್ಯ ಉಚ್ಚ ನ್ಯಾಯಾಲಯದ ರಿಟ್ ಅರ್ಜಿ ಸಂಖ್ಯೆ: 11717/2026ರಲ್ಲಿ ಮಾನ್ಯ ನ್ಯಾಯಾಲಯವು ದಿನಾಂಕ: 15.04.2026ರಂದು ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಲಿಯು ಹೊರಡಿಸಿರುವ ಸುತ್ತೋಲೆ ಸಂಖ್ಯೆ :AB(MISC)13/2025/E-63418, Dated :28.10.2025 ರನ್ವಯ 2025-26ನೇ ಸಾಲಿಗೆ ಅಂಕಗಳನ್ನು ನೀಡಲು ಕ್ರಮವಹಿಸುವಂತೆ ಸೂಚಿಸಿರುತ್ತದೆ. |
| ಈ) | ನ್ಯಾಯಾಲಯದ ಸೂಚನೆ ನಂತರ ಈ ವಿಚಾರದಲ್ಲಿ ಸರ್ಕಾರದ ನಿಲುವೇನು ? | ಮಾನ್ಯ ನ್ಯಾಯಾಲಯದ ಸೂಚನೆಯನ್ನು ಪಾಲಿಸಲು ಸರ್ಕಾರವು ಕ್ರಮವಹಿಸಿರುತ್ತದೆ. |

**ಸಂಖ್ಯೆ: ಇಪಿ 125 ಟಿಎಂಸಿ 2026**

**(ಎಸ್.ಮಧುಬಂಗಾರಪ್ಪ)**
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು